2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ

ಸಿ.ಸಿ. 3062/2024

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.02**

**ದಿನಾಂಕಃ** 13.03.2026 **ಸಿಡಬ್ಲ್ಯೂ.02**

| | |
|---|---|
| ಹೆಸರು | ಮಹಾಂತೇಶ |
| ತಂದೆ ಹೆಸರು | ಶೇಖರಪ್ಪ |
| ವಯಸ್ಸು | 35 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ಬೂದಿಹಾಳ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.1 ಮತ್ತು 3 ರವರ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಗುರುತಿಸಿದ್ದು ಅದು ಪಂಚರಿಗೆ ನೀಡಿದ ನೋಟಿಸ ಆಗಿದ್ದು ಅದನ್ನು ನಿಪಿ.2 ಎಂದು ಸಾಕ್ಷಿಯ ಸಹಿಯನ್ನು ನಿಪಿ.2 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಗುರುತಿಸಿದ್ದು ಅದು ಸ್ಥಳ ಪಂಚನಾಮೆ ಆಗಿದ್ದು ಅದನ್ನು ನಿಪಿ.3 ಎಂದು ಸಾಕ್ಷಿಯ ಸಹಿಯನ್ನು ನಿಪಿ.3 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಗುರುತಿಸಿದ್ದು ಅದು ಕಚ್ಚಾ ನಕಾಶೆ ಆಗಿದ್ದು ಅದನ್ನು ನಿಪಿ.4 ಎಂದು ಸಾಕ್ಷಿಯ ಸಹಿಯನ್ನು ನಿಪಿ.4 (ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ದಿಃ 02.12.2023 ರಂದು ಬೂದಿಹಾಳ ಗ್ರಾಮದಲ್ಲಿ ದೊಗ್ಗಳ್ಳಿ ಕಿರಣ ರವರ ಮನೆ ಹತ್ತಿರ ಕುಂಬಳೂರು ದಾವಣಗೆರೆ ರಸ್ತೆಯಲ್ಲಿ ಟ್ರಾಕ್ಟರ್ ಮತ್ತು ಬೈಕ ನಡುವೆ ಅಪಘಾತವಾದ ವಿಚಾರಕ್ಕೆ ಪೊಲೀಸರು ಪರಿಶೀಲನೆ ಮಾಡುವ ಕಾಲಕ್ಕೆ ಮಾಡಿರುತ್ತೇನೆ. ಪಂಚನಾಮೆ ಕಾಲಕ್ಕೆ ಕಚ್ಚಾ ನಕಾಶೆ ಮತ್ತು ಛಾಯ ಚಿತ್ರ ತೆಗೆದಿರುತ್ತಾರೆ. ಸಾಕ್ಷಿಯು ಗುರುತಿಸಿದ ಛಾಯ ಚಿತ್ರವನ್ನು ನಿಪಿ.5 ಎಂದು ಗುರುತಿಸಲಾಯಿತು. ಸದರಿ ಪಂಚನಾಮೆಯನ್ನು ಮದ್ಯಾಹ್ನ 2.00 ರಿಂದ 3.00 ಗಂಟೆವರೆಗೆ ಮಾಡಿರುತ್ತಾರೆ. ಪಂಚನಾಮೆ ಕಾಲಕ್ಕೆ ಪೊಲೀಸರು ನಮಗೆ ನೋಟಿಸ ನೀಡಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ವೈ ಹೆಚ್ ಡಿ ವಕೀಲರಿಂದಃ**

ಪಂಚನಾಮೆ ಜರುಗಿಸಲು ಪೊಲೀಸರು ನನಗೆ ಖುದ್ದಾಗಿ ನೋಟಿಸ ಜಾರಿ ಮಾಡಿಲ್ಲ. ನಿಪಿ.2 ನ್ನು ಜರುಗಿಸಲು ನಾನು ಪೊಲೀಸರಿಗೆ ಮಾಹಿತಿ ನೀಡಿಲ್ಲ. ಪೊಲೀಸರು ಸ್ಥಳದಲ್ಲಿ ನಿಪಿ.3 ನ್ನು ಬರೆದು

ಬೆರಳಚ್ಚು ಪಡಿಸಿದ ನಂತರ ಸಹಿ ಮಾಡು ಎಂದ ಮೇರೆಗೆ ನಾನು ಮಾಡಿರುತ್ತೇನೆ ಎಂದರೆ ಸರಿ. ಸ್ಥಳಕ್ಕೆ ಯಾವ ಪೊಲೀಸರು ಬಂದಿದ್ದರು ಎಂದು ನನಗೆ ಅವರ ಹೆಸರು ಪದನಾಮೆ ಗೊತ್ತಿಲ್ಲ. ನಿಪಿ.4 ನ್ನು ಪೊಲೀಸರೇ ತಯಾರಿಸಿರುತ್ತಾರೆ. ಆದರೆ ಅವರ ಹೆಸರು ಪದನಾಮೆ ನನಗೆ ಗೊತ್ತಿಲ್ಲ. ನಿಪಿ.5 ನ್ನು ಪೊಲೀಸರು ತೆಗೆದಿರುತ್ತಾರೆ. ಸದರಿಯವರ ಹೆಸರು ಪದನಾಮೆ ನನಗೆ ಗೊತ್ತಿಲ್ಲ. ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲದಿದ್ದರೂ ಸಹ ಚಾಸಾ.1 ರವರಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ